1526 (2066) ಶ್ರೀ ಶಿವಶಂಕರ್ ರೆಡ್ಡಿ ಎನ್ ಹೆಚ್ (ಗೌರಿಬಿದನೂರು) – ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೋಲಾರ ಜಿಲ್ಲೆ ಗೌರಿಬಿದನೂರು ತಾಲ್ಲೂಕಿನಲ್ಲಿ ಲೋಕೋಪಯೋಗಿ ಇಲಾಖಾ ವ್ಯಾಪ್ತಿಯ ರಾಜ್ಯ ಜಿಲ್ಲಾ ಹೆದ್ದಾರಿಗಳು ತುಂಬಾ ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಈ ರಸ್ತೆಗಳ ಅಭಿವೃದ್ಧಿಗೆ ಇದುವರೆಗೂ ಅನುದಾನ ಬಿಡುಗಡೆ ಯಾಗದಿರುವುದರಿಂದ ರಸ್ತೆಗಳು ದುರಸ್ತಿಯಾಗದೆ ತೀವ್ರ ರೀತಿಯಲ್ಲಿ ಅಪಘಾತಗಳು ನಡೆಯುತ್ತಿರುವುದು ನಿಜವಲ್ಲವೇ,

ಇ) ಈ ರಸ್ತೆಗಳ ಶೀಘ್ರ ಅಭಿವೃದ್ಧಿಗೆ ಅನುದಾನ ಬಿಡುಗಡೆ ಮಾಡಿ ಸಾರ್ವಜನಿಕರ ನಾಗರೀಕರ ಸಂಚಾರಕ್ಕೆ ಅನುಕೂಲ ಮಾಡಿಕೊಡುವುದು ಯಾವಾಗ?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಬಂದಿದೆ

ಆ) 2005–08 ನೇ ಸಾಲಿನ 3 ವರ್ಷಗಳ ರಾಜ್ಯ ಹೆದ್ದಾರಿ ನಿರ್ವಹಣೆಗೆ ರೂ 355 5 ಲಕ್ಷಗಳು, 2006–07 ನೇ ಸಾಲಿಗೆ ಜಿಲ್ಲಾ ಮುಖ್ಯ ರಸ್ತೆಗಳ ಅಭಿವೃದ್ಧಿ ಮತ್ತು ದುರುಸ್ತಿಗಾಗಿ ರೂ 150 00 ಲಕ್ಷಗಳ ಅನುದಾನ ಬಿಡುಗಡೆಯಾಗಿದ್ದು, ರಾಜ್ಯ ಹೆದ್ದಾರಿ ನಿರ್ವಹಣೆಯಡಿ 45 00 ಕಿಮೀಗಳ ಡಾಂಬರೀಕರಣವನ್ನು ಹಾಗೂ ಜಿಲ್ಲಾ ಮುಖ್ಯ ರಸ್ತೆಗಳ ಒಟ್ಟು ಉದ್ದ 25 0 ಕಿ ಮೀ ಗಳ ಅಭಿವೃದ್ಧಿ ಪೂರ್ಣಗೊಳಿಸಲಾಗಿದ್ದು, ಉಳಿದ 20 ಕಿ ಮೀ ಉದ್ದದ ರಸ್ತೆಗಳ ಅಭಿವೃದ್ಧಿಯನ್ನು ಅನುದಾನದ ಲಭ್ಯತೆಯನ್ನಾಧರಿಸಿ ಕ್ರಮ ಕೈಗೊಳ್ಳಲಾಗುವುದು

ಇ) ಅನುದಾನದ ಲಭ್ಯತೆಯನ್ನಾಧರಿಸಿ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳಲಾಗುವುದು